339 (142) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಕಾರವಾರ–ಅಂಕೋಲಾ ತಾಲ್ಲೂಕಿನ ನಡುವೆ 4 ಲೈನ್ ಹೆದ್ದಾರಿ ನಿರ್ಮಿಸಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದೇ,

ಆ) ಈ ಬಗ್ಗೆ ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೆ,

ಇ) ಹಾಗಿದ್ದಲ್ಲಿ ಪ್ರಸ್ತಾವನೆ ಯಾವ ಹಂತದಲ್ಲಿದೆ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಸಧ್ಯಕ್ಕೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ

ಆ) ಇಲ್ಲ

ಇ) ಅನ್ವಯಿಸುವುದಿಲ್ಲ

340 (143) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರವಾರ–ಕೈಗಾ–ಇಳಕಲ್ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯ ಗುಣಮಟ್ಟಕ್ಕೆ ಏರಿಸುವ ಪ್ರಸ್ತಾವನೆ ಸರ್ಕಾರದಲ್ಲಿ ಇದೆಯೇ,

ಆ) ಹಾಗಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಯಾವುದೇ ಪ್ರಸ್ತಾವನೆಯು ಇರುವುದಿಲ್ಲ

ಆ) ಉದ್ಭವಿಸುವುದಿಲ್ಲ

341 (144) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) ಮಾನ್ಯ ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ – ಬಸ್ ಡಿಪೋ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ತೀರಾ ಹಿಂದುಳಿದ ಈ ತಾಲ್ಲೂಕಿನಲ್ಲಿ ಬಸ್ ಡಿಪೋವನ್ನು ಯಾವಾಗ ಪ್ರಾರಂಭಿಸಲಾಗುವುದು,

ಇ) ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎನ್ ಚಲುವರಾಯಸ್ವಾಮಿ (ಸಾರಿಗೆ ಸಚಿವರು)

ಅ) ಬಂದಿದೆ

ಆ) ದಾಂಡೇಲಿ ಮತ್ತು ಹಳಿಯಾಳ ಎರಡು ಘಟಕಗಳು ಜೋಯಿಡಾದಿಂದ ಕ್ರಮವಾಗಿ 26 ಮತ್ತು 52 ಕಿ ಮೀಗಳ ಅಂತರದಲ್ಲಿದ್ದು, ಜೋಯೀಡಾ ಬಸ್ ನಿಲ್ದಾಣದ ಮುಖಾಂತರ 86 ಆಗಮನ ಮತ್ತು ನಿರ್ಗಮನಗಳು ಇದ್ದು ಪ್ರಯಾಣಿಕರಿಗೆ ಅನುಕೂಲವಾಗಿದೆ ಆದ್ದರಿಂದ, ಸದ್ಯದ ಪರಿಸ್ಥಿತಿಯಲ್ಲಿ ಜೋಯಿಡಾದಲ್ಲಿ ನೂತನ ಬಸ್ ಘಟಕವನ್ನು ನಿರ್ಮಿಸುವ ಪ್ರಸ್ತಾವನೆ ಇರುವುದಿಲ್ಲ

ಇ) ಉದ್ಭವಿಸುವುದಿಲ್ಲ

342 (145) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರವಾರ ಬಂದರಿನ 2ನೇ ಹಂತದ ನಿರ್ಮಾಣಕ್ಕೆ ಅನುಮತಿ ನೀಡುವ ಪ್ರಸ್ತಾವನೆ ಸರ್ಕಾರದಲ್ಲಿ ಇದೆಯೇ,

ಆ) ಇಲ್ಲಿನ ಅಡೆತಡೆ ಗೋಡೆಯನ್ನು ಇನ್ನೂ 250 ಮೀಟರ್ ವರೆಗೆ ವಿಸ್ತರಿಸುವ ಹಾಗೂ 13 ಮೀಟರ್ ನಷ್ಟು ಹೂಳೆತ್ತುವ ಪ್ರಸ್ತಾವನೆ ಸರ್ಕಾರದಲ್ಲಿ ಇದೆಯೇ,

ಇ) ಈ ಪ್ರಸ್ತಾವನೆಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಹೌದು

ರೂ 34 00 ಕೋಟಿ ಅಂದಾಜು ವೆಚ್ಚದಲ್ಲಿ ಕಾರವಾರ ಬಂದರಿನ 2ನೇ ಹಂತದ ಅಭಿವೃದ್ಧಿ ಯೋಜನೆ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ

ಆ) ಹೌದು

ಪ್ರಸ್ತುತ ಇರುವ ಅಲೆ ತಡೆಗೋಡೆಯನ್ನು ಇನ್ನೂ 240 ಮೀ ಉದ್ದಕ್ಕೆ ರೂ 48 50 ಕೋಟಿ ಅಂದಾಜು ವೆಚ್ಚದಲ್ಲಿ ವಿಸ್ತರಿಸುವ ಹಾಗೂ ಬಂದರಿನಲ್ಲಿ ರೂ 20 00 ಕೋಟಿ ಅಂದಾಜು ವೆಚ್ಚದಲ್ಲಿ ಹೂಳೆತ್ತುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ

ಇ) ಕಾರವಾರ ಬಂದರಿನ 2ನೇ ಹಂತದ ಅಭಿವೃದ್ಧಿ ಯೋಜನೆಯನ್ನು ರೂ 304 00 ಕೋಟಿ ಅಂದಾಜು ವೆಚ್ಚದಲ್ಲಿ National Maritime Development Project (N M D P) ಯೋಜನೆಯಡಿಯಲ್ಲಿ ಕೈಗೊಳ್ಳಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು ಇದು ಕೇಂದ್ರ ಸರ್ಕಾರ ಪರಿಶೀಲನೆಯಲ್ಲಿದೆ